991 (1173) ಶ್ರೀ ಅಶೋಕ ಗುರಪ್ಪಾ ಶಾಬಾದಿ (ಸಿಂಧಗಿ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ಸಿಂಧಗಿ ವಿಧಾನ ಸಭಾ ಕ್ಷೇತ್ರದ ಸಿಂಧಗಿ ಪಟ್ಟಣ ಹಾಗೂ ಗುಬ್ಬೇವಾಡಗಳಲ್ಲಿ ಪದವಿ ಪೂರ್ವ ಕಾಲೇಜಿನ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಬಂದಿದ್ದಲ್ಲಿ ಸಿಂಧಗಿ ಪಟ್ಟಣಕ್ಕೆ ಕಲಾ ಮತ್ತು ವಿಜ್ಞಾನ ಪದವಿ ಪೂರ್ವ ಕಾಲೇಜು ಹಾಗೂ ಗುಬ್ಬೇವಾಡಕ್ಕೆ ಒಂದು ಪದವಿ ಪೂರ್ವ ಕಾಲೇಜು ಮಂಜೂರು ಮಾಡಲು ಕೈಗೊಂಡಿರುವ ಕ್ರಮಗಳೇನು,

ಇ) ಯಾವ ಶೈಕ್ಷಣಿಕ ವರ್ಷದಿಂದ ಇಲ್ಲಿ ಕಾಲೇಜು ಪ್ರಾರಂಭಿಸಲಾಗುವುದು?

ಶ್ರೀ ಬಸವರಾಜ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಹೌದು

ಆಇ) ಸಿಂಧಗಿ ಪಟ್ಟಣಕ್ಕೆ ಸರ್ಕಾರಿ ಪದವಿ ಪೂರ್ವ ಕಾಲೇಜನ್ನು ಪ್ರಾರಂಭಿಸಲು ಜಿಲ್ಲಾ ಉಪ ನಿರ್ದೇಶಕರು, ಆಯುಕ್ತರು ಪದವಿ ಪೂರ್ವ ಶಿಕ್ಷಣ ಇಲಾಖೆ ಇವರಿಗೆ ವರದಿಯನ್ನು ಸಲ್ಲಿಸಿರುತ್ತಾರೆ ಆಯವ್ಯಯದಲ್ಲಿ ಅನುದಾನದ ಲಭ್ಯತೆ, ಶೈಕ್ಷಣಿಕ ಅಗತ್ಯತೆ ಇತ್ಯಾದಿಯನ್ನು ಪರಿಗಣಿಸಿ ಪದವಿ ಪೂರ್ವ ಕಾಲೇಜುಗಳನ್ನು ಮಂಜೂರು ಮಾಡಲಾಗುತ್ತಿದೆ ಇದೊಂದು ನಿರಂತರ ಪ್ರಕ್ರಿಯೆಯಾಗಿದೆ

ಗುಬ್ಬೆವಾಡಕ್ಕೆ ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರಾರಂಭಿಸಲು ಯಾವುದೇ ಪ್ರಸ್ತಾವನೆ ಬಂದಿರುವುದಿಲ್ಲ

993 (1175) ಶ್ರೀ ಅಶೋಕ ಗುರಪ್ಪ ಶಾಬಾದಿ (ಸಿಂಧಗಿ). ಮಾನ್ಯ ಜಲಸಂಪನ್ಮೂಲ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ಇಂಡಿ ಏತ ನೀರಾವರಿ ಯೋಜನೆ ಯಾವಾಗ ಪ್ರಾರಂಭಗೊಂಡಿತು, ಅದು ಯಾವಾಗ ಮುಕ್ತಾಯಗೊಳ್ಳಲಿದೆ,

ಆ) ಯೋಜನೆಯು ವಿಳಂಬವಾಗುತ್ತಿರುವುದು ನಿಜವೆ, ವಿಳಂಬವಾಗಲು ಕಾರಣಗಳೇನು,

ಇ) ಈ ಯೋಜನೆಗೆ ಬಿಡುಗಡೆಯಾಗಿರುವ ಹಣ ಎಷ್ಟು ಹಾಗೂ ಇದರಲ್ಲಿ ಖರ್ಚು ಮಾಡಿರುವ ಹಣ ಎಷ್ಟು,